**<u>ಪ್ರಧಾನ ಸಿವಿಲ್ ಮತ್ತು  ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿ.ಸಿ. ನಂ. 333/2023**

| | | | |
|---|---|---|---|
| **ಹೆಸರು** | **:** | **ವೆಂಕಟೇಶ** | **ಚಾಸಾ. 11** |
| **ತಂದೆಯ ಹೆಸರು** | **:** | **ಮಾಣಪ್ಪ** | **ಪ್ರಾ.ಸಾ. 4** |
| **ವಯಸ್ಸು** | **:** | **49 ವರ್ಷ** | **ದಿನಾಂಕಃ 10-09-2025** |
| **ಉದ್ಯೋಗ** | **:** | **PSI** | |
| **ವಾಸಸ್ಥಳ** | **:** | **ಕುಂಚಾವರಂ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಆಗಸ್ಟ 2023 ರಿಂದ ಇಲ್ಲಿಯವರೆಗೆ ಕುಂಚಾವರಂ ಪೋಲಿಸ ಠಾಣೆಯಲ್ಲಿ PSI ಆಗಿ ಕಾರ್ಯನಿರ್ವಹಿಸುತ್ತಿದ್ದೇನೆ.

ದಿನಾಂಕಃ 02-08-2023 ರಂದು ಪ್ರಕರಣದ ಕಡತವನ್ನು ಚಾಸಾ-10 ರವರಿಂದ ಪಡೆದು ದಿನಾಂಕ 24-08-2023 ರಂದು FSL ವರದಿಯನ್ನು ಪಡೆದಿದ್ದೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-2 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಅದೇ ದಿನ ತನಿಖೆ ಪೂರ್ಣಗೊಳಿಸಿ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿದ್ದೇನೆ. ಈಗ ನೋಡುತ್ತಿರುವ ಮು.ಮಾ-1 ಮತ್ತು 2ನ್ನು ನಾನು FSLರವರಿಂದ ಪಡೆದಿದ್ದೇನೆ.

**<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ NHR ವಕೀಲರ ಪರವಾಗಿ ಶ್ರೀ JHG ವಕೀಲರಿಂದಃ</u>**

ನನ್ನ ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. FSL ವರದಿ ಪಡೆದಿರುವ ಬಗ್ಗೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರು ಸಹ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**